KAUK910007192024



# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ , ಸಿದ್ಧಾಪುರ

**ಸಿ.ಸಿ. 334/2024**

ಫಿರ್ಯಾದಿಃ ಸೆಂಟ್ ಮಿಲಾಗ್ರೀಸ್ ಕ್ರೆಡಿಟ್ ಸೌಹಾರ್ದ ಕೋ–ಆಪರೇಟಿವ್ ಲಿಮಿಟೆಡ್, ಕಾರವಾರ, ಸಿದ್ಧಾಪುರ ಬ್ರಾಂಚ್, ಸಿದ್ಧಾಪುರ ಇದರ ಪರವಾಗಿ ಶ್ರೀ ಉಲ್ಲಾಸ ಪಿ ಶೇಟ್, 37 ವರ್ಷ, ಹಲಗೇರಿ, ಸಿದ್ಧಾಪುರ

–ವಿರುದ್ಧ–

ಆರೋಪಿಃ ಶಿವಾನಂದ ರವೀಂದ್ರ ಹಳೆಕೋಟೆ, ಪ್ರಾಯಸ್ಥ, ಉದ್ಯೋಗಃ ವ್ಯಾಪಾರ, ವಾಸಃ ರಾಜಮಾರ್ಗ, ಸಿದ್ಧಾಪುರ,

ನಾನು **ಶ್ರೀ ಉಮೇಶ. ಎಮ್.ಪಿ. ಬಿ.ಎ.ಎಲ್., ಎಲ್.ಎಲ್.ಬಿ.,** ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಸಿದ್ಧಾಪುರ ಆದ ನಾನು, ಆರೋಪಿತನಾದ ನಿನ್ನ ಮೇಲೆ ಈ ಕೆಳಗಿನಂತೆ ಆರೋಪ ಹೊರಿಸುತ್ತಿದ್ದೇನೆ.

## ಆಪಾದನೆ

ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಫಿರ್ಯಾದುದಾರರು ಸೆಂಟ್ ಮಿಲಾಗ್ರೀಸ್ ಕ್ರೆಡಿಟ್ ಸೌಹಾರ್ದ ಕೋ–ಆಪರೇಟಿವ್ ಲಿಮಿಟೆಡ್ ಸಂಸ್ಥೆಯು ಕರ್ನಾಟಕ ಸೌಹಾರ್ದಾ ಕೋ–ಆಪರೇಟಿವ್ ಕಾಯ್ದೆ ರಡಿಯಲ್ಲಿ ನೊಂದಾಯಿತ ಸಂಸ್ಥೆಯಾಗಿದ್ದು ಹಣಕಾಸು ವ್ಯವಹಾರ, ಅಗತ್ಯವಿರುವವರಿಗೆ ಹಣವನ್ನು ಸಾಲವಾಗಿ ನೀಡುವ ಸೌಹಾರ್ದ ಸಹಕಾರಿ ಸಂಸ್ಥೆಯಾಗಿದ್ದು, ಆರೋಪಿತನಾದ ನೀನು ಫಿರ್ಯಾದುದಾರರ ಸಹಕಾರಿ ಸಂಸ್ಥೆಯಲ್ಲಿ ಸಾಲಕ್ಕಾಗಿ ಮನವಿ ಮಾಡಿದ್ದು, ನಂತರ ದಿನಾಂಕ 23.10.2020 ರಂದು ರೂ. 5,00,000/– ಗಳನ್ನು ಸಾಲ ಪಡೆದಿದ್ದು, ಸದರಿ ಸಾಲಕ್ಕಾಗಿ ನೀನು ಎಲ್ಲಾ ದಾಖಲಾತಿ ಮತ್ತು ಆಗ್ರಿಮೆಂಟ್ ಮಾಡಿದ್ದು ಹಾಗೂ ಶ್ರೀ ಮಂಜುನಾಥ ಬೆಳ್ಳಿಯವರ್ ನಾಯ್ಕ, ಮಂಜುನಾಥ ಪೂಜಾರಿ ಮತ್ತು ಶ್ರೀಮತಿ ರಾಧ ಹಳೆಕೋಟೆ ರವರನ್ನು ಶ್ಯೂರಟೀಯಾಗಿಸಿದ್ದು, ಆರೋಪಿತನಾದ ನೀನು ಮತ್ತು ಶ್ಯೂರಿಟೀಗಳು ಸಾಲದ ಕಂತುಗಳನ್ನು ಸರಿಯಾಗಿ ಪಾವತಿ ಮಾಡದೆ ಇದ್ದು, ಸದರಿ ಸಾಲದ ಈಗಿನ ಬಾಕಿ ಮೊತ್ತವು ರೂ. 3,74,234/– ಆಗಿದ್ದು ಹಾಗೂ ಫಿರ್ಯಾದುದಾರರ ಸಂಸ್ಥೆಯು ಹಲವು ಬಾರಿ ಸಾಲದ ಮರುಪಾವತಿಗಾಗಿ ಬೇಡಿಕೆ

ಇಟ್ಟಿದ್ದು, ಸದರಿ ಸಾಲದ ಬಾಬ್ತಿಗಾಗಿ ದಿನಾಂಕ 12.09.2024 ರಂದು ಕೆನರಾ ಬ್ಯಾಂಕ್, ಸಿದ್ದಾಪುರ ಶಾಖೆಯ ಚೆಕ್ಕಿನ ಸಂಖ್ಯೆ: 690767 ನ ರೂ. 3,74,234/- ನ ಚೆಕನ್ನು ನೀಡಿದ್ದು, ತದನಂತರ ಸಹಕಾರಿ ಸಂಸ್ಥೆಯು ಸದರಿ ಚೆಕನ್ನು ನಗದು ಗೊಳಿಸಲು ಕೆನರಾ ಬ್ಯಾಂಕ್, ಸಿದ್ದಾಪುರ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿಃ 14.09.2024 ರಂದು "**Funds Insufficient**" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿರುವುದಾಗಿ ಮತ್ತು ಸದರಿ ವಿಷಯವನ್ನು ದಿಃ 24.09.2024 ರಂದು ಅವರ ವಕೀಲರ ಮೂಲಕ ನೋಟಿಸ್ಸು ನೀಡಿ ತಿಳಿಸಿರುವುದಾಗಿ, ಸದರಿ ನೋಟಿಸ್ಸುನ್ನು ಆರೋಪಿತನಾದ ನೀನು ದಿನಾಂಕ 25.09.2024 ರಂದು ಪಡೆದುಕೊಂಡಿದ್ದರೂ ನೀನು ಹಣವನ್ನು ಮರುಪಾವತಿ ಮಾಡದೇ **ನೆಗೊಷಬಲ್ ಇನ್ಸ್ಟ್ರುಮೆಂಟ್ ಆಕ್ಟ ರ 138** ಅಡಿಯಲ್ಲಿ ಅಫರಾದ ಎಸುಗಿರುವಿರೆಂದು ನಿನ್ನ ಮೇಲೆ ಆರೋಪಣೆ ಇದೆ ಮತ್ತು ಸದ್ರಿ ಆರೋಪಣೆಯನ್ನು ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಮಾಡಿರುತ್ತೀಯಾ ಎಂದು ಆರೋಪಿಸಲಾಗಿದೆ.

ಈ ಮೇಲ್ಕಂಡ ಆರೋಪಣೆಗೆ ನೀನು ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸಿರುತ್ತೇನೆ .

ಪ್ರಶ್ನೆಃ 1. ಈಗ ನಿನಗೆ ಮೇಲೆ ಓದಿ ಹೇಳಿ ವಿವರಿಸಿದ ಆರೋಪಣೆ ತಿಳಿಯಿತೆ ?

**ಉತ್ತರಃ**

ಪ್ರಶ್ನೆಃ 2. ನೀನು ಈ ಮೇಲಿನ ಆರೋಪಣೆಯನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ನಿನ್ನ ವಿರುದ್ಧ ವಿಚಾರಣೆ ನಡೆಯಬೇಕೆ?

**ಉತ್ತರಃ**

**ಪ್ರಶ್ನೆಃ 3** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ನಿಮ್ಮ ಕೆನರಾ ಬ್ಯಾಂಕ್ ಖಾತಾ ನಂ. 110003470045 ಖಾತೆಗೆ ಸಂಬಂಧಿಸಿದ ಚೆಕ್ ಆಗಿರುತ್ತದೆ ಎಂಬುದನ್ನು ಒಪ್ಪಿಕೊಳ್ಳವಿರಾ?

**ಉತ್ತರಃ**

**ಪ್ರಶ್ನೆಃ 4** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ಮೇಲಿನ ಸಹಿ ನಿಮ್ಮದೇ ಎಂದು ಒಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆ: 5** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ನ್ನು ಪಿರ್ಯಾದಿ ಸೊಸೈಟಿಗೆ ನೀಡಿರುವುದಾಗಿ ನೀವು ಒಪ್ಪಿಕೊಳ್ಳುವಿರ?

**ಉತ್ತರಃ**

**ಪ್ರಶ್ನೆಃ 6** ಪಿರ್ಯಾದಿ ಸೊಸೈಟಿಯಿಂದ ದಿನಾಂಕ 23.10.2020 ರಂದು ರೂ. 5,00,000/- ಸಾಲವನ್ನು ಪಡೆದಿರುವಿರಾ?

**ಉತ್ತರಃ**

**ಪ್ರಶ್ನೆಃ 7** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ದಿನಾಂಕ 12.09.2024 ರಲ್ಲಿ ನಮೂದಿಸಿದ ರೂ. 3,74,234/- ನ್ನು (ಮೂರು ಲಕ್ಷದ ಎಪ್ಪತ್ತನಾಲ್ಕು ಸಾವಿರದ ಎರಡು ನೂರ ಮೂವತ್ತನಾಲ್ಕು ರೂಪಾಯಿ ಮಾತ್ರ) ಪಿರ್ಯಾದಿ ಸೊಸೈಟಿಗೆ ಪಾವತಿ ಮಾಡುವ ಭಾದ್ಯತೆಯನ್ನು ನೀವು ಒಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆಃ 8** ಈ ಹಂತದಲ್ಲಿ ಈ ಪ್ರಕರಣವನ್ನು ರಾಜೀ ಮಾಡಿಕೊಳ್ಳಲು ಇಚ್ಚಿಸುವಿರಾ?

**ಉತ್ತರಃ**

ಸದ್ರಿ ಮೇಲಿನ ಆರೋಪಣೆಗಳನ್ನು ತೆರೆದ ನ್ಯಾಯಾಲಯದಲ್ಲಿ ದಿಃ **11-11-2025** ರಂದು ಆರೋಪಿತನಿಗೆ ಓದಿ ಹೇಳಿ, ಕೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ.,ಸಿದ್ದಾಪುರ.**